ಸನ್ನಡತೆಯ ಖೈದಿಗಳ ಬಿಡುಗಡೆ

63(189); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ರಾಜ್ಯದ ವಿವಿಧ ಜೈಲುಗಳಲ್ಲಿ ಜೀವಾವಧಿಗಿಂತ ಕಡಿಮೆ ಶಿಕ್ಷೆಗೆ ಗುರಿಯಾಗಿರುವ ಖೈದಿಗಳಿದ್ದಾರೆಯೇ ಹಾಗೂ ಸನ್ನಡತೆ ಆಧಾರದ ಮೇಲೆ ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಬಿಡುಗಡೆ ಯಾಗಲಿರುವ ಖೈದಿಗಳ ಪಟ್ಟಿಯನ್ನು ತಯಾರಿಸಲಾಗಿದೆಯೇ; ಈ ಪ್ರಕ್ರಿಯೆ ಈಗ ಯಾವ ಹಂತದಲ್ಲಿದೆ; ಎಷ್ಟು ಜನ ಮಹಿಳಾ ಮತ್ತು ಪುರುಷ ಖೈದಿಗಳು ಸನ್ನಡತೆಯ ಆಧಾರದ ಮೇಲೆ ವಿವಿಧ ಜೈಲುಗಳಿಂದ ಬಿಡುಗಡೆಯಾಗಲಿದ್ದಾರೆ; (ಜೈಲುವಾರು ವಿವರ ಒದಗಿಸುವುದು);

ಇ) ಇವರುಗಳ ಬಿಡುಗಡೆಗೆ ಈಗಾಗಲೇ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಶೀಘ್ರವಾಗಿ ಕ್ರಮ ಕೈಗೊಂಡು ಇವರುಗಳನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) ದಿನಾಂಕ 31–10–2014 ರ ಅಂತ್ಯಕ್ಕೆ ರಾಜ್ಯದ ವಿವಿಧ ಕೇಂದ್ರ ಮತ್ತು ಜಿಲ್ಲಾ ಕಾರಾಗೃಹಗಳಲ್ಲಿ ಜೀವಾವಧಿಗಿಂತ ಕಡಿಮೆ ಶಿಕ್ಷೆಗೆ ಗುರಿಯಾಗಿರುವ 942 ಪುರುಷ ಹಾಗೂ 37 ಮಹಿಳಾ ಅಲ್ಪಾವಧಿ ಶಿಕ್ಷಾ ಬಂದಿಗಳು ಇರುತ್ತಾರೆ. ಈ ಶಿಕ್ಷಾ ಬಂದಿಗಳನ್ನು ಸನ್ನಡತೆ ಆಧಾರದ ಮೇಲೆ ಬಿಡುಗಡೆ ಮಾಡುವ ಪ್ರಸ್ತಾವನೆ ಇರುವುದಿಲ್ಲ.

ಆ) ಇಂದ ಈ) ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ.